ಅಧ್ಯಕ್ಷರು: ಪ್ರಸ್ತಾವ ಏನೆಂದರೆ, " 2008ರ ಕರ್ನಾಟಕ ವಾಹನಗಳ ತೆರಿಗೆ [ತಿದ್ದುಪಡಿ] ವಿಧೇಯಕವನ್ನು ಅಂಗೀಕರಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು

5. ಕರ್ನಾಟಕ ಸ್ಟಾಂಪು[ತಿದ್ದುಪಡಿ]ವಿಧೇಯಕ,2008

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಜಿ.ಕರುಣಾಕರ ರೆಡ್ಡಿ[ಕಂದಾಯ ಸಚಿವರು]: ಮಾನ್ಯ ಅಧ್ಯಕ್ಷರೆ, 2008ರ ಕರ್ನಾಟಕ ಸ್ಟಾಂಪು[ತಿದ್ದುಪಡಿ]ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು

ಅಧ್ಯಕ್ಷರು: ಪ್ರಸ್ತಾವ ಏನೆಂದರೆ, "2008ರ ಕರ್ನಾಟಕ ಸ್ಟಾಂಪು[ತಿದ್ದುಪಡಿ] ವಿಧೇಯಕವನ್ನು ಪರ್ಯಾಲೋಚಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ 2: ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಅಧ್ಯಕ್ಷರು: "ಖಂಡ 2 ಈ ವಿಧೇಯಕದ ಅಂಗವಾಗಿರುತ್ತದೆ"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 2 ವಿಧೇಯಕದ ಅಂಗವಾಯಿತು)

ಖಂಡ 1 ಇತ್ಯಾದಿ:

ಅಧ್ಯಕ್ಷರು: ಪ್ರಸ್ತಾವ ಏನೆಂದರೆ, "ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲಾಯಿತು)

ಪ್ರಸ್ತಾವ ಅಂಗೀಕಾರ

ಶ್ರೀ ಜಿ.ಕರುಣಾಕರ ರೆಡ್ಡಿ[ಕಂದಾಯ ಸಚಿವರು]: ಮಾನ್ಯ ಅಧ್ಯಕ್ಷರೆ, 2008ರ ಕರ್ನಾಟಕ ಸ್ಟಾಂಪು[ತಿದ್ದುಪಡಿ]ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು: ಪ್ರಸ್ತಾವ ಏನೆಂದರೆ, "2008ರ ಕರ್ನಾಟಕ ಸ್ಟಾಂಪು[ತಿದ್ದುಪಡಿ] ವಿಧೇಯಕವನ್ನು ಅಂಗೀಕರಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು

10: ವಿತ್ತೀಯ ಕಾರ್ಯಕಲಾಪಗಳು

2008–09ನೇ ಸಾಲಿನ ಪೂರಕ ಅಂದಾಜುಗಳು(ಮೊದಲನೇ ಕಂತು)

ಅಧ್ಯಕ್ಷರು: ಈಗ 2008–09ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲಿನ ಸಾಮಾನ್ಯ ಚರ್ಚೆಗೆ ಹಾಗೂ 1ರಿಂದ 28ರವರೆಗಿನ ಅನುದಾನ ಬೇಡಿಕೆಗಳ

ಮೇಲಿನ ಚರ್ಚೆಗೆ ಸರ್ಕಾರ ಈಗಾಗಲೇ ಉತ್ತರ ಕೊಟ್ಟಿದೆ ಮತ್ತು ಅದನ್ನು ಮತಕ್ಕೆ ಹಾಕಲಾಗಿದೆ.

ಈಗ 2008–09ನೇ ಸಾಲಿನ ಪೂರಕ ಅಂದಾಜುಗಳನ್ನು ಮತಕ್ಕೆ ಹಾಕುವುದು.

ಶ್ರೀ ಬಿ.ಎಸ್.ಯಡಿಯೂರಪ್ಪ(ಮುಖ್ಯಮಂತ್ರಿಗಳು): ಸನ್ಮಾನ್ಯ ಅಧ್ಯಕ್ಷರೆ, ದಿನಾಂಕ 31.3.2009ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಬರುವ ಅಭಿಯಾಚನೆಗಳ ಕ್ರಮಾಂಕ 1, 4, 5, 9, 10, 13, 14, 17, 18, 19, 25 ಮತ್ತು 27 ಇವುಗಳಿಗೆ ಸಂಬಂಧಿಸಿದಂತೆ ಸಂದಾಯವಾಗುವ ವೆಚ್ಚಗಳನ್ನು ಭರಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ ಮತ್ತು ಬಂಡವಾಳ ಖಾತೆಯಲ್ಲಿ ಮಂಜೂರು ಮಾಡಿದ ಮೊಬಲಗೂ ಸೇರಿ ಬೇಡಿಕೆಗಳ ಪಟ್ಟಿಯಲ್ಲಿ ನಮೂದಿಸಿದ ಮೊಬಲಗಿಗೆ ಮೀರದ ಮೊತ್ತವನ್ನು ಮಂಜೂರು ಮಾಡಬೇಕೆಂದು ಕೋರುತ್ತೇನೆ.

ಅಧ್ಯಕ್ಷರು: ಪ್ರಸ್ತಾವ ಏನೆಂದರೆ, ದಿನಾಂಕ 31.3.2009ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಬರುವ ಅಭಿಯಾಚನೆಗಳ ಕ್ರಮಾಂಕ 1, 4, 5, 9, 10, 13, 14, 17, 18, 19, 25 ಮತ್ತು 27 ಇವುಗಳಿಗೆ ಸಂಬಂಧಿಸಿದಂತೆ ಸಂದಾಯವಾಗುವ ವೆಚ್ಚಗಳನ್ನು ಭರಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ ಮತ್ತು ಬಂಡವಾಳ ಖಾತೆಯಲ್ಲಿ ಮಂಜೂರು ಮಾಡಿದ ಮೊಬಲಗೂ ಸೇರಿ ಬೇಡಿಕೆಗಳ ಪಟ್ಟಿಯಲ್ಲಿ ನಮೂದಿಸಿದ ಮೊಬಲಗಿಗೆ ಮೀರದ ಮೊತ್ತವನ್ನು ಮಂಜೂರು ಮಾಡುವುದು.

ಪ್ರಸ್ತಾವವನ್ನು ಅಂಗೀಕರಿಸಲಾಯಿತು ಮತ್ತು ಪೂರಕ ಅಂದಾಜುಗಳನ್ನು ಮಂಜೂರು ಮಾಡಲಾಯಿತು

(ಮಾನ್ಯ ಅಧ್ಯಕ್ಷರ ಆದೇಶದ ಮೇರೆಗೆ ಮಂಜೂರಾದ 2008–09ನೇ ಸಾಲಿನ ಪೂರಕ ಅಂದಾಜುಗಳ (ಮೊದಲನೇ ಕಂತು) ಪ್ರಸ್ತಾಪಗಳನ್ನು ಈ ಕೆಳಗೆ ನಮೂದಿಸಲಾಗಿದೆ.)

ಅಭಿಯಾಚನೆ ಕ್ರಮಾಂಕ 1 – ಕೃಷಿ ಮತ್ತು ತೋಟಗಾರಿಕೆ

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ ದಿನಾಂಕ 31.3.2009ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಬರುವ ಅಭಿಯಾಚನೆ ಕ್ರಮಾಂಕ 1 – ಕೃಷಿ ಮತ್ತು ತೋಟಗಾರಿಕೆ ಇಲಾಖೆ ಸೇವೆಗಳಿಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ಭರಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ ಮತ್ತು ಬಂಡವಾಳ ಖಾತೆಯಲ್ಲಿ 1825.00 ಲಕ್ಷ ರೂಪಾಯಿಗಳಿಗೆ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡುವುದು.

ಅಭಿಯಾಚನೆ ಕ್ರಮಾಂಕ 5 – ಒಳಾಡಳಿತ ಮತ್ತು ಸಾರಿಗೆ

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ ದಿನಾಂಕ 31.3.2009ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಬರುವ ಅಭಿಯಾಚನೆ ಕ್ರಮಾಂಕ 5 – ಒಳಾಡಳಿತ ಮತ್ತು ಸಾರಿಗೆ ಇಲಾಖೆ ಸೇವೆಗಳಿಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ಭರಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ ಮತ್ತು ಬಂಡವಾಳ ಖಾತೆಯಲ್ಲಿ 16.67 ಲಕ್ಷ ರೂಪಾಯಿಗಳಿಗೆ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡುವುದು.

ಅಭಿಯಾಚನೆ ಕ್ರಮಾಂಕ 9 – ಸಹಕಾರ

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ ದಿನಾಂಕ 31.3.2009ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಬರುವ ಅಭಿಯಾಚನೆ ಕ್ರಮಾಂಕ 9 – ಸಹಕಾರ ಇಲಾಖೆ ಸೇವೆಗಳಿಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ಭರಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ ಮತ್ತು ಬಂಡವಾಳ ಖಾತೆಯಲ್ಲಿ 200.00 ಲಕ್ಷ ರೂಪಾಯಿಗಳಿಗೆ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡುವುದು.

ಅಭಿಯಾಚನೆ ಕ್ರಮಾಂಕ 10 – ಸಮಾಜ ಕಲ್ಯಾಣ

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ ದಿನಾಂಕ 31.3.2009ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಬರುವ ಅಭಿಯಾಚನೆ ಕ್ರಮಾಂಕ 10 – ಸಮಾಜ ಕಲ್ಯಾಣ ಇಲಾಖೆ ಸೇವೆಗಳಿಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ಭರಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ ಮತ್ತು ಬಂಡವಾಳ ಖಾತೆಯಲ್ಲಿ 2.00 ಲಕ್ಷ ರೂಪಾಯಿಗಳಿಗೆ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡುವುದು.

ಅಭಿಯಾಚನೆ ಕ್ರಮಾಂಕ 13 – ಆಹಾರ ಮತ್ತು ನಾಗರಿಕ ಸರಬರಾಜು

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ ದಿನಾಂಕ 31.3.2009ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಬರುವ ಅಭಿಯಾಚನೆ ಕ್ರಮಾಂಕ 13 – ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಸೇವೆಗಳಿಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ಭರಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ ಮತ್ತು ಬಂಡವಾಳ ಖಾತೆಯಲ್ಲಿ 45.00 ಲಕ್ಷ ರೂಪಾಯಿಗಳಿಗೆ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡುವುದು.

ಅಭಿಯಾಚನೆ ಕ್ರಮಾಂಕ 14 – ಕಂದಾಯ

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ ದಿನಾಂಕ 31.3.2009ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಬರುವ ಅಭಿಯಾಚನೆ ಕ್ರಮಾಂಕ 14 – ಕಂದಾಯ ಇಲಾಖೆ ಸೇವೆಗಳಿಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ಭರಿಸಲು ಸರ್ಕಾರಕ್ಕೆ

ರಾಜಸ್ವ ಖಾತೆಯಲ್ಲಿ ಮತ್ತು ಬಂಡವಾಳ ಖಾತೆಯಲ್ಲಿ 26.33 ಲಕ್ಷ ರೂಪಾಯಿಗಳಿಗೆ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡುವುದು.

ಅಭಿಯಾಚನೆ ಕ್ರಮಾಂಕ 17 – ಶಿಕ್ಷಣ

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ ದಿನಾಂಕ 31.3.2009ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಬರುವ ಅಭಿಯಾಚನೆ ಕ್ರಮಾಂಕ 17 – ಶಿಕ್ಷಣ ಇಲಾಖೆ ಸೇವೆಗಳಿಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ಭರಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ ಮತ್ತು ಬಂಡವಾಳ ಖಾತೆಯಲ್ಲಿ 63.66 ಲಕ್ಷ ರೂಪಾಯಿಗಳಿಗೆ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡುವುದು.

ಅಭಿಯಾಚನೆ ಕ್ರಮಾಂಕ 18 – ವಾಣಿಜ್ಯ ಮತ್ತು ಕೈಗಾರಿಕೆ

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ ದಿನಾಂಕ 31.3.2009ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಬರುವ ಅಭಿಯಾಚನೆ ಕ್ರಮಾಂಕ 18 – ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ ಸೇವೆಗಳಿಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ಭರಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ ಮತ್ತು ಬಂಡವಾಳ ಖಾತೆಯಲ್ಲಿ 726.25 ಲಕ್ಷ ರೂಪಾಯಿಗಳಿಗೆ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡುವುದು.

ಅಭಿಯಾಚನೆ ಕ್ರಮಾಂಕ 19 – ನಗರಾಭಿವೃದ್ಧಿ

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ ದಿನಾಂಕ 31.3.2009ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಬರುವ ಅಭಿಯಾಚನೆ ಕ್ರಮಾಂಕ 19 – ನಗರಾಭಿವೃದ್ಧಿ ಇಲಾಖೆ ಸೇವೆಗಳಿಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ಭರಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ ಮತ್ತು ಬಂಡವಾಳ ಖಾತೆಯಲ್ಲಿ 20.00 ಲಕ್ಷ ರೂಪಾಯಿಗಳಿಗೆ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡುವುದು.

ಅಭಿಯಾಚನೆ ಕ್ರಮಾಂಕ 25 – ಕನ್ನಡ ಮತ್ತು ಸಂಸ್ಕೃತಿ

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ ದಿನಾಂಕ 31.3.2009ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಬರುವ ಅಭಿಯಾಚನೆ ಕ್ರಮಾಂಕ 25 – ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸೇವೆಗಳಿಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ಭರಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ ಮತ್ತು ಬಂಡವಾಳ ಖಾತೆಯಲ್ಲಿ 10.00 ಲಕ್ಷ ರೂಪಾಯಿಗಳಿಗೆ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡುವುದು.

ಅಭಿಯಾಚನೆ ಕ್ರಮಾಂಕ 27 – ಕಾನೂನು

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ ದಿನಾಂಕ 31.3.2009ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಬರುವ ಅಭಿಯಾಚನೆ ಕ್ರಮಾಂಕ 27 – ಕಾನೂನು ಇಲಾಖೆ ಸೇವೆಗಳಿಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ಭರಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ ಮತ್ತು ಬಂಡವಾಳ ಖಾತೆಯಲ್ಲಿ 10.00 ಲಕ್ಷ ರೂಪಾಯಿಗಳಿಗೆ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡುವುದು.

11. ಶಾಸನ ರಚನೆ

ಕರ್ನಾಟಕ ಧನ ವಿನಿಯೋಗ ವಿಧೇಯಕ (ಸಂಖ್ಯೆ 1) 2008

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಬಿ.ಎಸ್.ಯಡಿಯೂರಪ್ಪ(ಮುಖ್ಯಮಂತ್ರಿಗಳು): ಮಾನ್ಯ ಅಧ್ಯಕ್ಷರೆ, 2008ರ ಕರ್ನಾಟಕ ಧನವಿನಿಯೋಗ (ಸಂಖ್ಯೆ 1) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು: ಪ್ರಸ್ತಾವ ಏನೆಂದರೆ, 2008ರ ಕರ್ನಾಟಕ ಧನವಿನಿಯೋಗ (ಸಂಖ್ಯೆ 1) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಬಿ.ಎಸ್.ಯಡಿಯೂರಪ್ಪ(ಮುಖ್ಯಮಂತ್ರಿಗಳು): ಮಾನ್ಯ ಅಧ್ಯಕ್ಷರೆ, 2008ರ ಕರ್ನಾಟಕ ಧನವಿನಿಯೋಗ (ಸಂಖ್ಯೆ 1) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು: ವಿಧೇಯಕ ಮಂಡಿಸಲಾಗಿದೆ.

(ಅನುಬಂಧ – VI)

ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

ಕರ್ನಾಟಕ ಧನ ವಿನಿಯೋಗ ವಿಧೇಯಕ (ಸಂಖ್ಯೆ 1) 2008

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಬಿ.ಎಸ್.ಯಡಿಯೂರಪ್ಪ(ಮುಖ್ಯಮಂತ್ರಿಗಳು): ಮಾನ್ಯ ಅಧ್ಯಕ್ಷರೆ, 2008ರ ಕರ್ನಾಟಕ ಧನವಿನಿಯೋಗ (ಸಂಖ್ಯೆ 1) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವ ಮಂಡಿಸಲಾಯಿತು

ಅಧ್ಯಕ್ಷರು: ಪ್ರಸ್ತಾವ ಏನೆಂದರೆ;

"2008ರ ಕರ್ನಾಟಕ ಧನವಿನಿಯೋಗ (ಸಂಖ್ಯೆ 1) ವಿಧೇಯಕವನ್ನು ಪರ್ಯಾಲೋಚಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು